# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನಂ.ಸ.ಕಾ.ನಿ.ಅ./ಕೋ.ಉ.ವಿ/ಪಿ.ಆರ್/27/2020-21

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ,
ಕೋರಮಂಗಲ ಉಪವಿಭಾಗ,
ಪಾಲಿಕೆ ಕಟ್ಟಡಗಳು, 2ನೇ ಅಡ್ಡರಸ್ತೆ,
5ನೇ ಬ್ಲಾಕ್, ಕೋರಮಂಗಲ,
ಬೆಂಗಳೂರು. ದಿನಾಂಕ: 02-02-2021

**-: ಸಭೆ ತಿಳುವಳಿಕೆ ಪತ್ರ :-**

**ವಿಷಯ :-** ಆಡುಗೋಡಿ ವಾರ್ಡ್ ಸಂಖ್ಯೆ.147ರ ವಾರ್ಡ್ ಮಟ್ಟದ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಿರುವ ಬಗ್ಗೆ.

**ಉಲ್ಲೇಖ:-** ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಕಚೇರಿ ಆದೇಶದ ಪತ್ರ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ:21-09-2020.

* * * * *

ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಆದೇಶದ ರೀತ್ಯಾ ವಾರ್ಡ್ ಸಂಖ್ಯೆ.147(ಆಡುಗೋಡಿ) ವಾರ್ಡ್ ಸಮಿತಿ ಸಭೆಯನ್ನು ನೋಡಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ದಿನಾಂಕ:06.02.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ಸಮಿತಿ ಸಭೆಯು ಬಿ.ಬಿ.ಎಂ.ಪಿ. ವಾಣಿಜ್ಯ ಸಂಕೀರ್ಣ, ಆಡುಗೋಡಿ, ಹೊಸೂರು ರಸ್ತೆ (ಕಾರ್ಯಪಾಲಕ ಅಭಿಯಂತರರ ಕಛೇರಿ) ಇಲ್ಲಿ ಜರುಗಲಿದ್ದು, ಸದರಿ ಸಭೆಗೆ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳು ತಪ್ಪದೇ ಹಾಜರಾಗಲು ಕೋರಿದೆ ಹಾಗೂ ಸಭೆಗೆ ಗೈರು ಹಾಜರಾಗುವ ಅಧಿಕಾರಿಗಳ ಹೆಸರನ್ನು ಮೇಲಾಧಿಕಾರಿಗಳ ಗಮನಕ್ಕೆ ತರಲಾಗುವುದು.

<u>ಸಭೆಯಲ್ಲಿ ಚರ್ಚಿಸಬಹುದಾದ ವಿಷಯಗಳು:</u> 1) ಕೋವಿಡ್-19ರ ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ. 2) ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ. 3) ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ. 4) ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ. 5) ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ. 6) ಬೀದಿ ದೀಪಗಳ ನಿರ್ವಹಣೆ ಬಗ್ಗೆ. 7) ವಿದ್ಯುತ್ ಸರಬರಾಜು (ಬೆಸ್ಕಾಂ)ಗೆ ಸಂಬಂಧಿಸಿದ ವಿಷಯದ ಬಗ್ಗೆ ಹಾಗೂ ಇನ್ನಿತರೆ ವಿಷಯಗಳು ಅಧ್ಯಕ್ಷರ ಸೂಚನೆಯಂತೆ.

ಕಾರ್ಯದರ್ಶಿ, ವಾರ್ಡ್ ಸಮಿತಿ
ವಾರ್ಡ್ ಸಂಖ್ಯೆ 147, ಆಡುಗೋಡಿ

ರವರಿಗೆ,
ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳು/
ವಾರ್ಡ್ ವ್ಯಾಪ್ತಿಯ ಬಡಾವಣೆಗಳ ನಿವಾಸಿಗಳಿಗೆ/
ಸಾರ್ವಜನಿಕ ಪ್ರಕಟಣೆ

ಪ್ರತಿಯನ್ನು:-

1. ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಅಧಿಕಾರಿಗಳಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್), ಕೋರಮಂಗಲ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
3. ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್), ಆಡುಗೋಡಿ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಕೋರಮಂಗಲ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ವಿದ್ಯುತ್ ಸರಬರಾಜು ನಿಗಮ, ಕೋರಮಂಗಲ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಂದಾಯ ಅಧಿಕಾರಿಗಳು, ಕೋರಮಂಗಲ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣಾ ವಿಭಾಗ, ಪಿ.ಟಿ.ಎಂ.ಲೇಔಟ್ ವಿಭಾಗ, ಆಡುಗೋಡಿ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
8. ಪೊಲೀಸ್ ಇನ್ಸ್‌ಪೆಕ್ಟರ್ (ಟ್ರಾಫಿಕ್), ಆಡುಗೋಡಿ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
9. ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು, ಬಿ.ಬಿ.ಎಂ.ಪಿ (ದಕ್ಷಿಣ), ಜಯನಗರ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
10. ಸಹಾಯಕ ನಿರ್ದೇಶಕರು, ತೋಟಗಾರಿಕೆ, ಬಿ.ಬಿ.ಎಂ.ಪಿ. (ದಕ್ಷಿಣ), ಜಯನಗರ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.

Scanned with CamScanner

Ward Committee Meeting Ward 147 Adugodi

DATE 06 02 2021

| SL NO | Name | Designation | Signature |
|---|---|---|---|
| 1 | Basavaraj R Kabade | Chairman | [signature] |
| 2 | Manjula [Ex-Corp] | Member | |
| 3 | Sampath (Ex Corp) | Member | [signature] |
| 4 | A.M Thyagaraj | member | [signature] |
| 5 | V. Hemavathy | Member | Hemavathi.V |
| 6 | Rathnamma | Member | [signature] |
| 7 | Bhagyalakshmi S | Member | |
| 8 | M. Gopal | Member | [signature] |
| 9 | B.D Nagaraju | Member | [signature] |
| 10 | Porapandiyan | Member | [signature] |
| 11 | Kemparaju | member | [signature] |
| 12 | Chandrashekar P | Secretary | [signature] |

Scanned with CamScanner

Officials

DATE 06 02 2021

| SL NO | Name | Designation | Signature |
|---|---|---|---|
| 1. | Md. Shadab Haider | Sr. H.I BBMP | [signature] |
| 2. | Durga prasad | JHI BBMP | [signature] |
| 3 | S. VIJAY KUMAR | AROKML Ti | [signature] |
| 4 | Shruti R Peddare | Z coordinator [Dwcc] [Ro samarthanam] | [signature] |
| 5 | mangal. m. madiwalar | coordinator samarthanam | [signature] |
| 6 | DEVAPPA. NAYAKARA | [signature] SAAHAS | [signature] |
| 7 | Lakshmi. R | Saahas | [signature] |
| 8 | R. [signature] | Jeeva.P. Samarthanam | [signature] |

PBC

Scanned with CamScanner

**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಕೋರಮಂಗಲ ಉಪ–ವಿಭಾಗದ, ಆಡುಗೋಡಿ ವಾರ್ಡ್ ಸಂಖ್ಯೆ–147**

**ದಿನಾಂಕ: 06–02–2021 ರಂದು ಫೆಬ್ರವರಿ–2021 ಮಾಹೆಯ**

**ವಾರ್ಡ್ ಸಮಿತಿ ಸಭೆಯ ನಡವಳಿಗಳು**

ಶ್ರೀ ಬಸವರಾಜ್ ಕಬಾಡೆ, ಅಧೀಕ್ಷಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 147ರ ರವರ ಅಧ್ಯಕ್ಷತೆಯಲ್ಲಿ ಬಿ.ಬಿ.ಎಂ.ಪಿ ವಾಣಿಜ್ಯ ಸಂಕೀರ್ಣ, (ಕಾರ್ಯಪಾಲಕ ಅಭಿಯಂತರರ ಕಛೇರಿ) ಆಡುಗೋಡಿಯಲ್ಲಿ ದಿನಾಂಕ: 06.02.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು:

**ಹಾಜರಿದ್ದ ಸದಸ್ಯರು:–**

1. ಶ್ರೀ ಸಂಪತ್
2. ಶ್ರೀ ಎ.ಎಂ. ತ್ಯಾಗರಾಜ್
3. ಶ್ರೀಮತಿ ವಿ. ಹೇಮಾವತಿ
4. ಶ್ರೀ ಎಂ. ಗೋಪಾಲ್
5. ಶ್ರೀ ಬಿ.ಡಿ. ನಾಗರಾಜು
6. ಶ್ರೀ ಪಾಂಡಿಯನ್
7. ಶ್ರೀ ಕೆಂಪರಾಜು

**ಹಾಜರಿದ್ದ ಅಧಿಕಾರಿಗಳು:–**

1. ಶ್ರೀ ಚಂದ್ರಶೇಖರ್ .ಪಿ, ಸದಸ್ಯ ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು, ವಾರ್ಡ್–147, ಆಡುಗೋಡಿ
2. ಶ್ರೀ ಎಂ.ಡಿ. ಶಾದಬ್ ಹೈದರ್, ಹಿರಿಯ ಆರೋಗ್ಯ ನಿರೀಕ್ಷಕರು
3. ಶ್ರೀ ದುರ್ಗಾ ಪ್ರಸಾದ್, ಕಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ ಎಸ್. ವಿಜಯ ಕುಮಾರ್, ತೆರಿಗೆ ನಿರೀಕ್ಷಕರು
5. ಶ್ರೀಮತಿ ಶೃತಿ .ಆರ್, ಸಮರ್ಥನಮ್
6. ಶ್ರೀಮತಿ ಮಂಗಳ .ಎಂ, ಸಮರ್ಥನಮ್
7. ಶ್ರೀ ದೇವಪ್ಪ ನಾಯಕರ, ಸಾಹಸ್
8. ಶ್ರೀಮತಿ ಲಕ್ಷ್ಮೀ .ಆರ್, ಸಾಹಸ್
9. ಶ್ರೀ ಪಿ. ಜೀವಾ, ಸಮರ್ಥನಮ್

* * * * *

ಶ್ರೀ ಬಸವರಾಜ್ ಕಬಾಡೆ, ಅಧೀಕ್ಷಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 147 ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರುಗಳನ್ನು ಹಾಗೂ ವಾರ್ಡ್‌ನ ಅಧಿಕಾರಿಗಳನ್ನು ಸಭೆಗೆ ಸ್ವಾಗತಿಸಿದರು ಮತ್ತು ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳು, ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲು ತಿಳಿಸಿದರು.

ಶ್ರೀ ಬಸವರಾಜ್ ಕಬಾಡೆ, ಅಧೀಕ್ಷಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ರವರು ಮಾತನಾಡಿ, ಆಡುಗೋಡಿ ವ್ಯಾಪ್ತಿಯಲ್ಲಿ ಖಾಲಿ ನಿವೇಶನದಲ್ಲಿ ನಿರ್ಮಾಣಗೊಳ್ಳುವ ಬ್ಲಾಕ್‌ಸ್ಪಾಟ್‌ಗಳನ್ನು ತಡೆಗಟ್ಟುವ ಉದ್ದೇಶದಿಂದ ಹಾಗೂ ನಿವೇಶನದ



Scanned with CamScanner

ಮಾಲೀಕರುಗಳನ್ನು ಪತ್ತೆ ಹಚ್ಚುವ ದೃಷ್ಟಿಯಿಂದ ಖಾಲಿ ನಿವೇಶನಗಳ ಮುಂದೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸ್ವತ್ತು ಎಂಬ ನಾಮಫಲಕಗಳನ್ನು ಅಳವಡಿಸಲು ಸೂಚಿಸಿದರು.

ಶ್ರೀ ಪಾಂಡಿಯನ್ ಮತ್ತು ಶ್ರೀ ಸಂಪತ್ ರವರು ಮಾತನಾಡಿ, ಆಡುಗೋಡಿ ವ್ಯಾಪ್ತಿಯಲ್ಲಿ ಒಣತ್ಯಾಜ್ಯ ಸಂಗ್ರಹಣೆ ಮಾಡಲು ಎರಡು ವಾಹನಗಳು ಮಾತ್ರ ಇದ್ದು, ಆ ವಾಹನಗಳು ವಾರದಲ್ಲಿ ಎರಡು ಬಾರಿ ಮಾತ್ರ ಸಂಗ್ರಹಣೆ ಮಾಡುತ್ತಿದ್ದು, ಇದರಿಂದಾಗಿ ಆಡುಗೋಡಿ ವ್ಯಾಪ್ತಿಯಲ್ಲಿ ಪೂರ್ಣ ಪ್ರಮಾಣದಲ್ಲಿ ಕಸ ಸಂಗ್ರಹಿಸಲು ಸಾಧ್ಯವಾಗುತ್ತಿಲ್ಲ. ಆದುದರಿಂದ ಇನ್ನು ಒಂದು ವಾಹನವನ್ನು ಕಸ ಸಂಗ್ರಹಣೆಗಾಗಿ ತೆಗೆದುಕೊಳ್ಳುವುದು ಹಾಗೂ ವಾರದಲ್ಲಿ ಮೂರು ದಿನ ಕಸ ಸಂಗ್ರಹಣೆ ಮಾಡಬೇಕೆಂದು ತಿಳಿಸಿದರು.

ಶ್ರೀ ಬಸವರಾಜ್ ಕಬಾಡೆ, ಅಧೀಕ್ಷಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ರವರು ಮಾತನಾಡಿ, ಕಸ ಸಂಗ್ರಹಣೆ ಮತ್ತು ವಿಲೇವಾರಿಗಾಗಿ ಸಮರ್ಥನಮ್ ಮತ್ತು ಸಾಹಸ್ ಸಂಸ್ಥೆಯವರು ಹೊಂದಾಣಿಕೆಯಿಂದ ಕಾರ್ಯನಿರ್ವಹಿಸಬೇಕೆಂದು ತಿಳಿಸಿದರು.

ಶ್ರೀ ಪಾಂಡಿಯನ್ ರವರು ಮಾತನಾಡಿ, ರಾಜೇಂದ್ರನಗರ ಪ್ರದೇಶದಲ್ಲಿರುವ ರಸ್ತೆ ಚರಂಡಿಯಲ್ಲಿನ ಹೂಳು ತೆಗೆಯುವ ಕಾಮಗಾರಿಯನ್ನು ಕೈಗೊಳ್ಳಬೇಕೆಂದು ಸಭೆಯಲ್ಲಿ ತಿಳಿಸಿದರು. ಇದಕ್ಕೆ ಸಭೆಯಲ್ಲಿ ಹಾಜರಿದ್ದ ಶ್ರೀ ಚಂದ್ರಶೇಖರ್ .ಪಿ ರವರು ಸದರಿ ಪ್ರದೇಶದಲ್ಲಿ ಕೈಗೊಳ್ಳುವ ಹೂಳೆತ್ತುವ ಕಾಮಗಾರಿಯು ಟೆಂಡರ್ ಪ್ರಕ್ರಿಯೆಯಲ್ಲಿರುತ್ತದೆ ಎಂದು ಸಭೆಗೆ ತಿಳಿಸಿದರು.

ಶ್ರೀ ಬಿ.ಡಿ. ನಾಗರಾಜು ರವರು ಮಾತನಾಡಿ, ರಸ್ತೆ ಬದಿಯಲ್ಲಿರುವ ರಸ್ತೆ ದೀಪಗಳನ್ನು ನಿಯಮಿತವಾಗಿ ಪರಿಶೀಲನೆ ಮಾಡುವುದು ಹಾಗೂ ಹದಗೆಟ್ಟಿರುವ ರಸ್ತೆ ದೀಪಗಳನ್ನು ಸರಿಪಡಿಸಬೇಕೆಂದು ತಿಳಿಸಿದರು.

ಶ್ರೀ ಬಿ.ಡಿ. ನಾಗರಾಜು ರವರು ಮಾತನಾಡಿ, ರಾಜೇಂದ್ರನಗರ ಮತ್ತು 7ನೇ ಬ್ಲಾಕ್‌ನಲ್ಲಿ ಸಂಜೆ ವೇಳೆಯಲ್ಲಿ ಸೊಳ್ಳೆಗಳ ನಿಯಂತ್ರಣಕ್ಕಾಗಿ ಸೊಳ್ಳೆಗಳ ನಿಯಂತ್ರಣ ಔಷಧಿಯನ್ನು ಸಿಂಪಡಿಸಬೇಕೆಂದು ತಿಳಿಸಿದರು. ಇದಕ್ಕೆ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ನಿರೀಕ್ಷಕರಾದ ಶ್ರೀ ಎಂ.ಡಿ. ಶಾದಬ್ ಹೈದರ್ ರವರು ಸೋಮವಾರ ಮತ್ತು ಮಂಗಳವಾರದಲ್ಲಿ ಸೊಳ್ಳೆಗಳ ನಿಯಂತ್ರಣ ಔಷಧಿಯನ್ನು ಸಿಂಪಡಿಸಲಾಗುವುದು ಎಂದು ತಿಳಿಸಿದರು.

ಶ್ರೀ ಕೆಂಪರಾಜು ರವರು ಮಾತನಾಡಿ, 7ನೇ ಬ್ಲಾಕ್ ಮತ್ತು ರಾಜೇಂದ್ರನಗರದಲ್ಲಿ ಇರುವ ಡೆಬ್ರಿಸ್‌ಗಳನ್ನು ತೆರವುಗೊಳಿಸಬೇಕೆಂದು ತಿಳಿಸಿದರು. ಶ್ರೀ ಚಂದ್ರಶೇಖರ್ .ಪಿ ರವರು ಮಾತನಾಡಿ, ಸೋಮವಾರ ಮತ್ತು ಮಂಗಳವಾರ ದಿನದಂದು ಡೆಬ್ರಿಸ್‌ಗಳನ್ನು ತೆರವುಗೊಳಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.

ಶ್ರೀ ಪಾಂಡಿಯನ್ ರವರು ಮಾತನಾಡಿ, ಆಡುಗೋಡಿ ವ್ಯಾಪ್ತಿಯಲ್ಲಿ ವಿದ್ಯುತ್ ಬಿಲ್‌ಗಳ ಮೊತ್ತದಲ್ಲಿ ಸಾಕಷ್ಟು ಏರುಪೇರಾಗಿದ್ದು, ಅದರ ಬಗ್ಗೆ ಮಾಹಿತಿಯನ್ನು ಒದಗಿಸುವ ಸಲುವಾಗಿ ಮುಂದಿನ ವಾರ್ಡ್ ಸಮಿತಿ ಸಭೆಗೆ ಕಡ್ಡಾಯವಾಗಿ ಬೆಸ್ಕಾಂ ಅಧಿಕಾರಿಗಳು ಹಾಜರಾಗಬೇಕೆಂದು ಸಭೆಯಲ್ಲಿ ತಿಳಿಸಿದರು.

ಶ್ರೀ ಗೋಪಾಲ್ ರವರು ಮಾತನಾಡಿ, ಕೊಳವೆಯಿಂದ ಬರುವ ನೀರಿನ ಹರಿವಿನ ಪ್ರಮಾಣ ಕಡಿಮೆ ಇರುತ್ತದೆ. ಆದ ಕಾರಣ ಬೂಸ್ಟರ್ ಪಂಪ್ (Booster Pump) ಅನ್ನು ಅಳವಡಿಸುವಂತೆ ಸಭೆಗೆ ತಿಳಿಸಿದರು.

ಶ್ರೀಮತಿ ಹೇಮಾವತಿ ರವರು ಮಾತನಾಡಿ, 1ನೇ ಮುಖ್ಯರಸ್ತೆ, 2ನೇ ಅಡ್ಡರಸ್ತೆ 8ನೇ ಬ್ಲಾಕ್ ಕೋರಮಂಗಲದಲ್ಲಿ Kerb Stone ಗಳಿಗೆ ಪೈಂಟಿಗ್ ಮಾಡಿಸಬೇಕೆಂದು ತಿಳಿಸಿದರು.



Scanned with CamScanner

ಶ್ರೀಮತಿ ಹೇಮಾವತಿ ರವರು ಮಾತನಾಡಿ, ಅಂಬೇಡ್ಕರ್ ಉದ್ಯಾನವನಕ್ಕೆ ವಾಚ್‌ಮೆನ್ ಅನ್ನು ನೇಮಿಸಬೇಕೆಂದು ತಿಳಿಸಿದರು.

ಕೊನೆಯದಾಗಿ ಸದಸ್ಯ ಕಾರ್ಯದರ್ಶಿಗಳು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಅಧಿಕಾರಿಗಳಿಗೆ ವಂದನೆಯನ್ನು ತಿಳಿಸುತ್ತಾ, ಇಂದಿನ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡಿರುವ ಕ್ರಮಗಳನ್ನು ಮುಂದಿನ ಸಭೆಯಲ್ಲಿ ಪೂರ್ಣ ಮಾಹಿತಿಯನ್ನು ಒದಗಿಸಬೇಕೆಂದು ಕಾರ್ಯದರ್ಶಿ ಮತ್ತು ಇಲಾಖಾ ಅಧಿಕಾರಿಗಳಿಗೆ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ ಚಂದ್ರಶೇಖರ್ .ಪಿ)
ಸದಸ್ಯ ಕಾರ್ಯದರ್ಶಿ
ಹಾಗೂ ಕಿರಿಯ ಅಭಿಯಂತರರು,
ವಾರ್ಡ್-147 ಆಡುಗೋಡಿ ವಿಭಾಗ

(ಶ್ರೀ ಬಸವರಾಜ್ ಕಬಾಡೆ)
ನೋಡಲ್ ಅಧಿಕಾರಿಗಳು
ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್-147, ಆಡುಗೋಡಿ



Scanned with CamScanner

06/02/2021





Scanned with CamScanner